ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಬುಧವಾರ, ದಿನಾಂಕ : 03 ನೇ ಫೆಬ್ರುವರಿ, 2021

ನಾಗಮಂಗಲ ತಾಲ್ಲೂಕಿನ ರಾಜ್ಯ ಹೆದ್ದಾರಿ ರಸ್ತೆಗಳ ಅಭಿವೃದ್ಧಿಪಡಿಸುವ ಕಾಮಗಾರಿಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

234 (365) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2018-19ನೇ ಸಾಲಿನಲ್ಲಿ ಲೋಕೋಪಯೋಗಿ ಇಲಾಖೆಯ ವತಿಯಿಂದ ಲೆಕ್ಕ ಶೀರ್ಷಿಕೆ:5054-04-337-0-01 -154ರಡಿ ನಾಗಮಂಗಲ ತಾಲ್ಲೂಕಿನ ಕಾಂತಾಪುರ ಮಾರ್ಗ ರಾಜ್ಯ ಹೆದ್ದಾರಿ19(ಎನ್.ಹೆಚ್-150ಎ) ಅನ್ನು ಹೊಣಕೆರೆ ಬಳಿ ಸೇರುವ ಜಿಲ್ಲಾ ಮುಖ್ಯರಸ್ತೆ ಮತ್ತು ನಾಗಮಂಗಲ ತಾಲ್ಲೂಕು ದೇವಲಾಪುರ ಮಾರ್ಕೋನಹಳ್ಳಿ ಸೇರುವ ಜಿಲ್ಲಾ ಮುಖ್ಯ ರಸ್ತೆಯ ರಾಜ್ಯ ಹೆದ್ದಾರಿ ರಸ್ತೆಯ ಅಭಿವೃದ್ಧಿಪಡಿಸುವ ಕಾಮಗಾರಿಯನ್ನು ರೂ.750.00 ಲಕ್ಷಗಳಿಗೆ ಕಾಮಗಾರಿ ಮತ್ತು ಕೋಳಾಲ-ತುರುವೇಕೆರೆ-ದಬ್ಬೇಘಟ್ಟ ರಸ್ತೆಯ (ಎಂ.ಡಿ.ಆರ್) ಸರಪಳಿ 0.00 ರಿಂದ 54.00 ಕಿ.ಮೀ.ವರೆಗೆ ಕಾಮಗಾರಿಯನ್ನು 1800.00 ಲಕ್ಷಗಳಿಗೆ ಕಾಮಗಾರಿ ಮಂಜೂರಾಗಿ ಪ್ರಸ್ತುತ ಕಾಮಗಾರಿ ಪೂರ್ಣಗೊಳಿಸಬೇಕಾದ ಸಮಯ ಮುಗಿದಿದ್ದರೂ ಇನ್ನೂ ಕಾಮಗಾರಿ ಪೂರ್ಣಗೊಳ್ಳದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕಾಮಗಾರಿ ಕಳಪೆ ಗುಣಮಟ್ಟದಿಂದ ಕೂಡಿದ್ದು ಅಂದಾಜು ಪಟ್ಟಿಯಲ್ಲಿರುವಂತೆ ಕಾಮಗಾರಿ ಪೂರೈಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಗುಣಮಟ್ಟ ಪರಿಶೀಲಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ; (ವಿವರ ನೀಡುವುದು)

(ಇ) ಕಾಮಗಾರಿ ವಿಳಂಬದಿಂದ ಸುತ್ತಮುತ್ತಲಿನ ಸಾರ್ವಜನಿಕರಿಗೆ ದಿನನಿತ್ಯ ತಾಲ್ಲೂಕು ಕೇಂದ್ರಕ್ಕೆ ಓಡಾಡಲು ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತುರ್ತು ಕಾಮಗಾರಿಯನ್ನು ಗುಣಮಟ್ಟದಿಂದ ಪೂರ್ಣಗೊಳಿಸುವುದು ಯಾವಾಗ; (ವಿವರ ನೀಡುವುದು)

(ಈ) ಸಂಬಂಧಪಟ್ಟ ಗುತ್ತಿಗೆದಾರರು ಮತ್ತು ಇಲಾಖಾ ಅಧಿಕಾರಿಗಳ ವಿರುದ್ಧ ಯಾವ ಶಿಸ್ತು ಕ್ರಮಕೈಗೊಳ್ಳಲಾಗಿದೆ ? (ವಿವರ ನೀಡುವುದು)